**ಕರ್ನಾಟಕ ಸರ್ಕಾರ**

**ಮೀನುಗಾರಿಕೆ ನಿರ್ದೇಶನಾಲಯ**

**ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗೆ ನೇಮಕಾತಿ ಪ್ರಾಧಿಕಾರ**

3ನೇ ಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ

ಡಾ. ಅಂಬೇಡ್ಕರ್ ವೀದಿ, ಬೆಂಗಳೂರು 560 001

ಸಂಖ್ಯೆ:ಮೀನಿ/75/ಸಿಬ್ಬಂದಿ(2)2012-2013 ದಿನಾಂಕ: 18/11/2015.

## <u>ಪ್ರಕಟಣೆ</u>

ವಿಷಯ: ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗಳ ನೇಮಕಾತಿ ಕುರಿತು ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

--

ಮೀನುಗಾರಿಕೆ ಇಲಾಖೆಯಲ್ಲಿ ಖಾಲಿಯಿರುವ ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವೆಗಳು (ಮೀನುಗಾರಿಕೆ ಕ್ಷೇತ್ರಪಾಲಕ ಹುದ್ದೆಗಳ ನೇಮಕಾತಿ) ನಿಯಮಗಳು 2003ರ ಮತ್ತು ತಿದ್ದುಪಡಿ ಅಧಿಸೂಚನೆಯಂತೆ ನೇಮಕಾತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್ಲೈನ್ ಮೂಲಕ ರಾಜ್ಯವ್ಯಾಪಿ ಸ್ಥಳೀಯ ವೃಂದದ 50 ಹಾಗೂ ಹೈದ್ರಾಬಾದ್ ಕರ್ನಾಟಕ ಭಾಗಕ್ಕೆ ಮೀಸಲಿರಿಸಲಾದ 22 ಹುದ್ದೆಗಳು ಸೇರಿ ಒಟ್ಟು 72 ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ / ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಸದರಿ ಹುದ್ದೆಯ ವೇತನ ಶ್ರೇಣಿ ರೂ:10400-16400 ಆಗಿದ್ದು "ಸಿ" ಗುಂಪಿನ ಹುದ್ದೆಯಾಗಿರುತ್ತದೆ. ದಿನಾಂಕ:20-11-2015 ರಿಂದ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಕಡೆಯ ದಿನಾಂಕ: 19-12-2015 ಆಗಿರುತ್ತದೆ.

ಹುದ್ದೆಗಳ ವರ್ಗೀಕರಣ, ವಯೋಮಿತಿ, ಪರೀಕ್ಷಾ ಶುಲ್ಕ, ಈಜು ಪರೀಕ್ಷೆ, ಲಿಖಿತ ಪರೀಕ್ಷೆ, ಲಿಖಿತ ಪರೀಕ್ಷೆಯ ಪಠ್ಯಸೂಚಿ, ಆಯ್ಕೆಯ ವಿಧಾನ, ಪರೀಕ್ಷಾ ಕೇಂದ್ರಗಳ ವಿವರಗಳು ಮುಂತಾದ ವಿವರಗಳನ್ನು ಅಂತರ್ಜಾಲದಲ್ಲಿ ಪ್ರಕಟಿಸಲಾಗಿದ್ದು, ಇಲಾಖೆಯ ಅಧಿಕೃತ ವೆಬ್ಸೈಟ್ ಆದ www.karnataka.gov.in/fisheries ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಛೇರಿಯ ದೂರವಾಣಿ ಸಂಖ್ಯೆ:080-22864604 ನ್ನು ಸಂಪರ್ಕಿಸಬಹುದಾಗಿದೆ.

ಸಹಿ/-

ಮೀನುಗಾರಿಕೆ ನಿರ್ದೇಶಕರು ಹಾಗೂ

ಮೀನುಗಾರಿಕೆ ಕ್ಷೇತ್ರಪಾಲಕರ ನೇಮಕಾತಿ ಪ್ರಾಧಿಕಾರ.

## Contents


ಪ್ರಕಟಣೆ ... 1

1. ಹುದ್ದೆಗಳ ವಿವರ : ... 4
2. ಹುದ್ದೆಗಳ ವರ್ಗೀಕರಣ ... 4
3. ಅರ್ಹತಾ ಷರತ್ತುಗಳು ... 5
4. ಮೀನುಗಾರಿಕೆ ಕ್ಷೇತ್ರಪಾಲಕರ ಕಾರ್ಯಕ್ಷಮತೆ (Job Chart) ... 6
5. ಶೈಕ್ಷಣಿಕ ವಿದ್ಯಾರ್ಹತೆ ... 6
6. ಪರೀಕ್ಷಾ ವಿಧಾನ ... 6
7. ವಯೋಮಿತಿ ... 8
8. ಆನ್ಲೈನ್ (Online) ಮೂಲಕ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಅವಧಿ ... 10
9. ಆನ್ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿಧಾನ ... 10
10. ಅರ್ಜಿ ಶುಲ್ಕ. ... 12
11. ಶುಲ್ಕ ಪಾವತಿಸಲು ಅನುಸರಿಸಬೇಕಾದ ವಿಧಾನ: ... 12
12. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ... 13
13. ಗ್ರಾಮೀಣಾ ಅಭ್ಯರ್ಥಿಗಳು:- ... 13
14. ಕನ್ನಡ ಮಾಧ್ಯಮ ಅಭ್ಯರ್ಥಿ ... 14
15. ಅಂಗವಿಕಲ ಅಭ್ಯರ್ಥಿ ... 14
16. ಯೋಜನಾ ನಿರಾಶ್ರಿತ ಅಭ್ಯರ್ಥಿ ... 14
17. ಹೈದ್ರಾಬಾದ್ ಕರ್ನಾಟಕ ಪ್ರದೇಶದ ಅಭ್ಯರ್ಥಿ:- ... 15
18. ಪ್ರಮುಖ ಸೂಚನೆಗಳು ... 15
19. ಮೀನುಗಾರಿಕೆ ಇಲಾಖೆ ನೇಮಕಾತಿ ಪ್ರಾಧಿಕಾರದೊಡನೆ ಪತ್ರ ವ್ಯವಹಾರ :- ... 17
20. ವಿಶೇಷ ಸೂಚನೆಗಳು ... 17
21. ದುರ್ನಡತೆ ... 18
22. ನಮೂನೆಗಳು ... 19

**ಮೀನುಗಾರಿಕೆ ನಿರ್ದೇಶಕರು ಹಾಗೂ ಮೀನುಗಾರಿಕೆ ಕ್ಷೇತ್ರಪಾಲಕರ ನೇರ ನೇಮಕಾತಿ ಪ್ರಾಧಿಕಾರ, ಮೀನುಗಾರಿಕೆ ನಿರ್ದೇಶನಾಲಯ, 3ನೇ ಮಹಡಿ, ಪೋಡಿಯಂ ಬ್ಲಾಕ್, ಡಾ:ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-560001.**

## ಅಧಿಸೂಚನೆ

ಸಂಖ್ಯೆ:ಮೀನಿ/75/ಸಿಬ್ಬಂದಿ(2)/2012-2013 ದಿನಾಂಕ:18-11-2015.

ವಿಷಯ:- ಮೀನುಗಾರಿಕೆ ಇಲಾಖೆಯಲ್ಲಿ ಖಾಲಿ ಇರುವ ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:- 1) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 08 ಸೆಹಿಮ 95 ದಿ:20-6-1995

2) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 06 ಸೆನನಿ 2001 ದಿ:13-2-2001

3) ಸರ್ಕಾರದ ಪತ್ರ ಸಂಖ್ಯೆ:ಪಸಂಮೀ155 ಮೀಇಸೇ 2012 ದಿ:08-11-2013

4) ಸರ್ಕಾರದ ಪತ್ರ ಸಂಖ್ಯೆ:ಪಸಂಮೀ108 ಮೀಇಸೇ 2015 ದಿ:26-6-2015

****

ಮೀನುಗಾರಿಕೆ ಇಲಾಖೆಯಲ್ಲಿ ರಾಜ್ಯಮಟ್ಟದ ವೃಂದದಲ್ಲಿ ಖಾಲಿ ಇರುವ **50** ಹಾಗೂ ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿನ ಸ್ಥಳೀಯ ವೃಂದದ **22** ಸೇರಿ ಒಟ್ಟು **72** ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಮೀನುಗಾರಿಕೆ ಇಲಾಖೆಯಿಂದ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮದನ್ವಯ ಭರ್ತಿ ಮಾಡಲು ಉಲ್ಲೇಖ**(3)** ಮತ್ತು **(4)** ರ ಸರ್ಕಾರದ ಆದೇಶದನ್ವಯ ಆನ್ಲೈನ್ **(Online)** ಮೂಲಕ ಅರ್ಜಿಗಳನ್ನು ಅರ್ಹ ಅಭ್ಯರ್ಥಿಗಳಿಂದ ಆಹ್ವಾನಿಸಲಾಗಿದೆ. ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ದಿನಾಂಕ**: 20-11-2015** ರಿಂದ **19-12-2015** ರವರೆಗೆ ನಿಗದಿಪಡಿಸಲಾಗಿದೆ. ಹಾಗೂ ಈ ಕೆಳಕಾಣಿಸಿದ ಷರತ್ತಿಗೊಳಪಡಿಸಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

## 1. ಹುದ್ದೆಗಳ ವಿವರ :

| | |
|---|---|
| ಅ) ಹುದ್ದೆ ಹಾಗೂ ಸಂಖ್ಯೆ | ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗಳು<br>ರಾಜ್ಯಮಟ್ಟದ ವೃಂದ - 50 ಹುದ್ದೆಗಳು<br>ಹೈದ್ರಾಬಾದ್ ಕರ್ನಾಟಕ - 22 ಹುದ್ದೆಗಳು<br>ಭಾಗದ ಸ್ಥಳೀಯ ವೃಂದ<br>ಒಟ್ಟು ಹುದ್ದೆಗಳು - 72 ಹುದ್ದೆಗಳು |
| ಆ) ವೇತನ ಶ್ರೇಣಿ | 10400-200-12000-250-13000-300-14200-350-15600-400-16400 |

## 2. ಹುದ್ದೆಗಳ ವರ್ಗೀಕರಣ

ಪ್ರಸ್ತುತ ಅಧಿಸೂಚನೆಯಂತೆ 2ನೇ ಆವರ್ತದ 2ನೇ ಬಿಂದುವಿನಿಂದ 52ನೇ ಬಿಂದುವಿನವರೆಗೆ 50 ಹುದ್ದೆಗಳ ರೋಸ್ಟರ್ ಬಿಂದುಗಳ ವಿವರ:-

| ಕ್ರ. ಸಂ. | ವರ್ಗ | ಇತರೆ | ಮಹಿಳೆ | ಗ್ರಾಮೀಣ | ಯೋಜನಾ ನಿರಾಶ್ರಿತರು | ಅಂವಿ. ಅಭ್ಯರ್ಥಿ | ಕನ್ನಡ ಮಾಧ್ಯಮ | ಮಾ.ಸೈ. | ಒಟ್ಟು |
|---|---|---|---|---|---|---|---|---|---|
| 1 | ಪ.ಜಾ | 2 | 2 | 1 | 1 | - | - | 1 | 7 |
| 2 | ಪ.ಪಂ. | - | 1 | - | - | 1 | - | - | 2 |
| 3 | ಪ್ರ-1 | - | 1 | 1 | - | - | - | - | 2 |
| 4 | ಪ್ರ-2(ಎ) | 2 | 2 | 2 | 1 | - | - | 1 | 8 |
| 5 | ಪ್ರ-2(ಬಿ) | - | 1 | 1 | - | - | - | - | 2 |
| 6 | ಪ್ರ-3(ಎ) | - | 1 | 1 | - | - | - | - | 2 |
| 7 | ಪ್ರ-3(ಬಿ) | 1 | - | 1 | - | - | - | - | 2 |
| 8 | ಸಾಮಾನ್ಯ | 5 | 8 | 6 | 1 | 1 | 2 | 2 | 25 |
| | ಒಟ್ಟು | 10 | 16 | 13 | 3 | 2 | 2 | 4 | 50 |

ಹೈದ್ರಾಬಾದ್ ಕರ್ನಾಟಕ ಭಾಗದ ಬಳ್ಳಾರಿ, ಕೊಪ್ಪಳ, ರಾಯಚೂರು, ಕಲಬುರಗಿ,ಯಾದಗಿರಿ ಮತ್ತು ಬೀದರ್ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಭಾರತ ಸಂವಿಧಾನದ ಅನುಚ್ಛೇದ**-371(ಜೆ)** ರನ್ವಯ ಮೀನುಗಾರಿಕೆ

ಕ್ಷೇತ್ರಪಾಲಕರ ವೃಂದದಲ್ಲಿ ಖಾಲಿ ಇರುವ ನೇರ ನೇಮಕಾತಿ ಹುದ್ದೆಗಳಲ್ಲಿ ಕೈಬಿಟ್ಟು ಹೋಗಿರುವ ಮೀಸಲಾತಿ ಬಿಂದುಗಳಿಗೆ ಸಂಬಂಧಿಸಿದಂತೆ ನೇರ ನೇಮಕಾತಿಗೊಳಿಸಲು ಆ ಭಾಗದ ಅಭ್ಯರ್ಥಿಗಳಿಗೆ **ಮೀ**ಸಲಿರಿಸಲಾಗಿದೆ**.** ಸದರಿ ಹುದ್ದೆಗಳಿಗೆ ಆ ಭಾಗದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ**.** ತತ್ಸಂಬಂಧ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನಿಯಮಾನುಸಾರಸಂಬಂಧಿಸಿದ ಪ್ರಾಧಿಕಾರದಿಂದ ಅನೆಕ್ಷರ್**-**ಎ ನಲ್ಲಿ ಅರ್ಹತಾ ಪ್ರಮಾಣ ಪತ್ರ ಹೊಂದಿರತಕ್ಕದ್ದು**.**

ಹುದ್ದೆಗಳ ವರ್ಗೀಕರಣದ ವಿವರಗಳು: ಒಟ್ಟು ಹುದ್ದೆಗಳು: 22 ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗಳು.

| **ಕ್ರ. ಸಂ.** | **ವರ್ಗ** | **ಇತರೆ** | **ಮಹಿಳೆ** | **ಗ್ರಾಮೀಣ** | **ಯೋಜನಾ ನಿರಾಶ್ರಿತರು** | **ಅಂವಿ. ಅಭ್ಯರ್ಥಿ** | **ಕನ್ನಡ ಮಾಧ್ಯಮ** | **ಮಾ.ಸೈ.** | **ಒಟ್ಟು** |
|---|---|---|---|---|---|---|---|---|---|
| 1 | **ಪ.ಜಾ** | 1 | 1 | 1 | - | 1 | - | - | 4 |
| 2 | **ಪ.ಪಂ.** | - | 1 | - | - | - | - | - | 1 |
| 3 | **ಪ್ರ-1** | - | 1 | - | - | - | - | - | 1 |
| 4 | **ಪ್ರ-2(ಎ)** | 1 | 2 | 2 | - | 1 | - | - | 6 |
| 5 | **ಪ್ರ-2(ಬಿ)** | - | - | - | - | - | - | - | - |
| 6 | **ಪ್ರ-3(ಎ)** | - | - | - | - | - | - | - | - |
| 7 | **ಪ್ರ-3(ಬಿ)** | - | - | - | - | - | - | - | - |
| 8 | **ಸಾಮಾನ್ಯ** | 2 | 5 | - | 1 | 1 | - | 1 | 10 |
| | **ಒಟ್ಟು** | **4** | **10** | **3** | **1** | **3** | **-** | **1** | **22** |

## 3. ಅರ್ಹತಾ ಷರತ್ತುಗಳು

ಅ) ಭಾರತೀಯ ನಾಗರೀಕನಾಗಿರತಕ್ಕದ್ದು

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ಮೀನುಗಾರಿಕೆ ಕ್ಷೇತ್ರಪಾಲಕರ ನೇಮಕಾತಿಗೆ ಮೀಸಲಿರಿಸಿರುವ ಅಂಗವಿಕಲ ಹುದ್ದೆಯು ದೃಷ್ಠಿಮಾಂದ್ಯತೆ (Low Vision) ರಿಗೆ ಮೀಸಲಿರಿಸಲಾಗಿದೆ. ಸದರಿ ಅಭ್ಯರ್ಥಿಗಳು

ಲಭ್ಯವಿಲ್ಲದಿದ್ದಲ್ಲಿ ನಿಯಮಾನುಸಾರ ನಂತರದ ಅಂಗವಿಕಲತೆಯ ಮೀಸಲಾತಿಗಳನ್ನು ಪರಿಗಣಿಸಲಾಗುವುದು.

ಉ) ನಿಗಧಿತ ಶೈಕ್ಷಣಿಕ ಅರ್ಹತೆ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿ, ನಿಗಧಿತ ವಯೋಮಿತಿಯೊಳಗಿರುವ ಅಭ್ಯರ್ಥಿಗ¼ÀÄ ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಅರ್ಹತೆಯನ್ನು ಹೊಂದಿರುತ್ತಾರೆ.

## 4. ಮೀನುಗಾರಿಕೆ ಕ್ಷೇತ್ರಪಾಲಕರ ಕಾರ್ಯಕ್ಷಮತೆ (Job Chart)

ಎ) ಕೆರೆ / ನದಿ/ಜಲಾಶಯಗಳಲ್ಲಿ ಮೀನು ಹಿಡುವಳಿ ಮಾಡುವುದು/ ತಾಯಿ ಮೀನುಗಳ ಸಂಗ್ರಹಣೆ ಮತ್ತು ಪೋಷಣೆ ಮಾಡುವುದು.

ಬಿ) ಮೀನುಮರಿ ಉತ್ಪಾದನಾ ಕೇಂದ್ರಗಳಲ್ಲಿ ಹಾಗೂ ತಾಲ್ಲೂಕು ಮಟ್ಟದ ಪಾಲನಾ ಕೇಂದ್ರಗಳಿಗೆ ಸಂಬಂಧಿಸಿದಂತೆ ಕೊಳಗಳನ್ನು ಶುಚಿಗೊಳಿಸುವುದು, ನೀರು ತುಂಬಿಸುವುದು, ಸಗಣಿ ಗೊಬ್ಬರ ಹಾಕಿ ತೊಟ್ಟಿ/ಕೊಳಗಳನ್ನು ಫಲವತ್ತೀಕರಿಸುವುದು, ಪ್ರತಿನಿತ್ಯ ಮೀನುಮರಿಗಳಿಗೆ ಆಹಾರ ಹಾಕುವುದು/ಮೀನುಮರಿಗಳ ಜೋಪಾಸನೆ ಮಾಡುವುದು. ಬೆಳೆದ ಮರಿಗಳನ್ನು ಕ್ರೋಢೀಕರಿಸಿ ವಿತರಣೆ ಮಾಡುವುದು ಮತ್ತು ಕೇಂದ್ರದ ಶುಚಿತ್ವ ಕಾಪಾಡುವುದು.

ಸಿ) ತರಬೇತಿ ಕೇಂದ್ರಗಳಿಗೆ ಸಂಬಂಧಿಸಿದಂತೆ ಮೀನು ಬಲೆ ನೇಯುವುದು, ಬಲೆ ರಿಪೇರಿ ಮತ್ತು ದೋಣಿ ನಿರ್ವಹಣೆ

ಡಿ) ತಾಲ್ಲೂಕು ಮಟ್ಟದ ಮೀನುಗಾರಿಕೆ ಕಛೇರಿಗಳಿಗೆ ಸಂಬಂಧಿಸಿದಂತೆ ಕಛೇರಿಗಳನ್ನು ಶುಚಿಗೊಳಿಸುವುದು, ಕೆರೆಗಳ ಹರಾಜು/ಗುತ್ತಿಗೆ ವಿಲೇವಾರಿಗೆ ಸಂಬಂಧಿಸಿದಂತೆ ಇಸ್ತಿಹಾರ್ಗಳನ್ನು ಜಾರಿಗೊಳಿಸುವುದು ಹಾಗೂ ಕಛೇರಿಯ ಇತರೆ ಕೆಲಸಗಳ ನಿರ್ವಹಣೆ.

## 5. ಶೈಕ್ಷಣಿಕ ವಿದ್ಯಾರ್ಹತೆ

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಹಾಗೂ ಈಜು ಬಲ್ಲವರಾಗಿರಬೇಕು.

## 6. ಪರೀಕ್ಷಾ ವಿಧಾನ

ಕರ್ನಾಟಕ ನಾಗರೀಕ ಸೇವೆಗಳು (ಮೀನುಗಾರಿಕೆ ಕ್ಷೇತ್ರಪಾಲಕ ಹುದ್ದೆಗಳ ನೇಮಕಾತಿ) ನಿಯಮಗಳು 2003 ಮತ್ತು ತಿದ್ದುಪಡಿ ಅಧಿಸೂಚನೆಗಳನ್ವಯ ಈಜು ಪರೀಕ್ಷೆಯನ್ನು ನಡೆಸಲಾಗುವುದು. ಸ್ವೀಕೃತಗೊಂಡ ಅರ್ಜಿಗಳನ್ನು ಪರಿಶೀಲಿಸಿದ ತರುವಾಯ ಅರ್ಹರಿರುವ ಎಲ್ಲಾ ಅಭ್ಯರ್ಥಿಗಳನ್ನುಸಂಬಂಧಿಸಿದ ಜಿಲ್ಲಾ ಕೇಂದ್ರಗಳಲ್ಲಿ ಈಜು ಪರೀಕ್ಷೆಗೊಳಪಡಿಸಲಾಗುವುದು. ಏಕ ಕಾಲದಲ್ಲಿ ನಿಲ್ಲದೇ 25 ಮೀಟರ್ ದೂರವನ್ನು ಈಜಿದರೆ ಮಾತ್ರ ಈಜು ಪರೀಕ್ಷೆಯಲ್ಲಿ ತೇರ್ಗಡೆಯೆಂದು ಪರಿಗಣಿಸಲಾಗುವುದು. ಈಜು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅರ್ಹ

ಅಭ್ಯರ್ಥಿಗಳಿಗೆ ಕರ್ನಾಟಕ ನಾಗರೀಕ ಸೇವೆಗಳು (ಮೀನುಗಾರಿಕೆ ಕ್ಷೇತ್ರಪಾಲಕ ಹುದ್ದೆಗಳ ನೇಮಕಾತಿ) ನಿಯಮಗಳು 2002ರ ಮತ್ತು ತಿದ್ದುಪಡಿ ಅಧಿಸೂಚನೆಗಳನ್ವಯ ಲಿಖಿತ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುವುದು. ಲಿಖಿತ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೇಷ್ಠತೆ ಮತ್ತು ಕಾಲ ಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಗಳನುಸಾರ ಮೀಸಲಾತಿಯನ್ವಯ ಅಂತಿಮವಾಗಿ ಲಭ್ಯವಾಗುವ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.

ಈ ರೀತಿ ಆಯ್ಕೆಯಾದ ಅಭ್ಯರ್ಥಿಗಳನ್ನು ಇಲಾಖೆಯ ತರಬೇತಿ ಕೇಂದ್ರಗಳಿಗೆ ಮೀನುಗಾರಿಕೆ ಕ್ಷೇತ್ರಪಾಲಕರ ತರಬೇತಿಗಾಗಿ ಕಳುಹಿಸಿಕೊಡಲಾಗುವುದು. ಇಲಾಖಾ ನಿಯಮಾನುಸಾರ ಯಶಸ್ವಿಯಾಗಿ ತರಬೇತಿಯನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಮಾತ್ರ ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗೆ ನೇಮಕಾತಿ ಆದೇಶವನ್ನು ನೀಡಲಾಗುವುದು. ಆದಾಗ್ಯೂ ಈಗಾಗಲೇ ಸದರಿ ತರಬೇತಿಯನ್ನು ಪೂರ್ಣಗೊಳಿಸಿರುವ ಅಭ್ಯರ್ಥಿಗಳು ತರಬೇತಿಗೆ ಹಾಜರಾಗುವ ಅಗತ್ಯವಿರುವುದಿಲ್ಲ.

6.1 ಲಿಖಿತ ಪರೀಕ್ಷೆಯು ವಸ್ತುನಿಷ್ಠ ಬಹು ಆಯ್ಕೆ (Multiple Objective Choice Type)ಮಾದರಿಯ ಎರಡು ಪತ್ರಿಕೆಗಳನ್ನು ಹೊಂದಿರುತ್ತದೆ.

ಸಾಮಾನ್ಯ ಜ್ಞಾನ - 50 ಅಂಕಗಳು - ಒಂದು ಘಂಟೆ ಅವಧಿ

ಸಾಮಾನ್ಯ ಕನ್ನಡ - 50 ಅಂಕಗಳು – ಒಂದು ಘಂಟೆ ಅವಧಿ

6.2 ಸಾಮಾನ್ಯ ಜ್ಞಾನ ಪತ್ರಿಕೆಯು ಸಾಮಾನ್ಯವಾಗಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗೆ ಇರಬೇಕಾದ ಸಾಮಾನ್ಯ ಜ್ಞಾನಕ್ಕೆ ಸಂಬಂಧಪಟ್ಟ ಕನಿಷ್ಠ ವಿದ್ಯಾಮಟ್ಟಕ್ಕೆ ಸಮನಾಗಿರುವುದು ಮತ್ತು ಇದು ಭಾರತದ ಸಂವಿಧಾನ, ಭಾರತದ ಇತಿಹಾಸ ಮತ್ತು ಸಂಸ್ಕೃತಿ, ಸಾಮಾನ್ಯ ಅರ್ಥಶಾಸ್ತ್ರ, ಭೂಗೋಳ ಶಾಸ್ತ್ರ ಇತ್ತೀಚಿನ ಘಟನೆಗಳು, ದೈನಿಕ ಜೀವನ ದಲ್ಲಿ ವಿಜ್ಞಾನ ಮತ್ತು ಒಬ್ಬ ವಿದ್ಯಾವಂತ ವ್ಯಕ್ತಿಯು ದೈನಂದಿನ ಜೀವನದಲ್ಲಿ ಗಮನಿಸ ಬಹುದಾದಂತಹ ವಿಷಯಗಳ ಮೇಲಿನ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

6.3 ಸಾಮಾನ್ಯ ಕನ್ನಡ ಪತ್ರಿಕೆಯು ಸಾಮಾನ್ಯವಾಗಿ ಕೆ.ಎಸ್.ಇ. ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣನಾಗಿರುವ ವಿದ್ಯಾರ್ಥಿಗೆ ಇರಬೇಕಾದ ಕನಿಷ್ಠ ವಿದ್ಯಾಮಟ್ಟಕ್ಕೆ ಸಮನಾಗಿರುವುದು. ಇದರ ಮೂಲಕ ಅಭ್ಯರ್ಥಿಯ ಕನ್ನಡ, ವ್ಯಾಕರಣ, ಶಬ್ದಸಂಪತ್ತು, ಕಾಗುಣಿತ ಸಮಾನಾರ್ಥಕ ಪದಗಳು, ವಿರುದ್ಧಾತ್ಮಕ ಪದಗಳು ಇವುಗಳ ಪರಿಜ್ಞಾನ, ಕನ್ನಡ ಭಾಷೆಯನ್ನು ಅರಿಯುವ ಮತ್ತು ಗ್ರಹಿಸುವ ಅಭ್ಯರ್ಥಿಯ ಶಕ್ತಿಯ ಮತ್ತು ಅದರ ಸರಿಯಾದ ಹಾಗೂ ತಪ್ಪು ಬಳಕೆ ಇತ್ಯಾದಿಗಳನ್ನು ಪರಿಶೀಲಿಸುವ ಅಭ್ಯರ್ಥಿಯ ಸಾಮರ್ಥ್ಯ ಇವುಗಳನ್ನು ಪರೀಕ್ಷಿಸಲು ಉದ್ದೇಶಿಸಲಾಗಿದೆ.

6.4 ಪರೀಕ್ಷೆಯನ್ನು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಮತ್ತು ಆಯ್ದ ಕೆಲವು ಸ್ಥಳಗಳಲ್ಲಿ ಮತ್ತು ಕಾರ್ಯಸಾಧ್ಯತೆ ಪರೀಕ್ಷೆ, ಈಜು ಪರೀಕ್ಷೆಯನ್ನು ಆಯ್ದ ಸ್ಥಳಗಳಲ್ಲಿ ಮಾತ್ರ ನಡೆಸಲು ಉದ್ದೇಶಿಸಲಾಗಿದ್ದು, ಅಭ್ಯರ್ಥಿಗಳು ಯಾವುದಾದರೂ ಒಂದು ಜಿಲ್ಲಾ ಕೇಂದ್ರವನ್ನು ಮಾತ್ರ ಪರೀಕ್ಷಾ ಕೇಂದ್ರವನ್ನಾಗಿ ಆಯ್ದುಕೊಳ್ಳತಕ್ಕದ್ದು. ಪರೀಕ್ಷಾ ಕೇಂದ್ರಗಳ ಹಂಚಿಕೆ ಹಾಗೂ

ಪರೀಕ್ಷಾ ದಿನಾಂಕವು ನೇಮಕಾತಿ ಪ್ರಾಧಿಕಾರದ ಅಂತಿಮ ತೀರ್ಮಾನದಂತೆ ಬದಲಾವಣೆಗೆ ಒಳಪಟ್ಟಿರುತ್ತದೆ. ಪ್ರಾಧಿಕಾರವು ಅಭ್ಯರ್ಥಿಗೆ ಬೇರೆ ಕೇಂದ್ರವನ್ನು ಸೂಚಿಸಬಹುದು ಅಥವಾ ಪರಿಸ್ಥಿತಿಗನುಗುಣವಾಗಿ ಹೊಸ ಕೇಂದ್ರವನ್ನು ಹಂಚಿಕೆ ಮಾಡಬಹುದು. ಈ ವಿಷಯದಲ್ಲಿ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿಲ್ಲ.

## 7. ವಯೋಮಿತಿ

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಾಣಿಸಿದ ವಯೋಮಿತಿ ಹೊಂದಿರತಕ್ಕದ್ದು.

| | |
|---|---|
| ಪ.ಜಾತಿ/ಪ.ಪಂಗಡ, ಪ್ರವರ್ಗ-1 | ಕನಿಷ್ಠ 18 ವರ್ಷ ಗರಿಷ್ಠ 40 ವರ್ಷ |
| ಇತರೆ ಹಿಂದುಳಿದ ವರ್ಗ | ಕನಿಷ್ಠ 18 ವರ್ಷ ಗರಿಷ್ಠ 38 ವರ್ಷ |
| ಸಾಮಾನ್ಯ ವರ್ಗ | ಕನಿಷ್ಠ 18 ವರ್ಷ ಗರಿಷ್ಠ 35 ವರ್ಷ |

ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ(ಟಿ.ಸಿ),ಕ್ಯುಮುಲೇಟಿವ್ ರೆಕಾರ್ಡ್ನಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

### 7.1 ವಯೋಮಿತಿಯಲ್ಲಿ ಸಡಿಲಿಕೆ (Age Relaxation)

ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾಹಿಂದೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ ಐದು(5) ವರ್ಷಗಳ ಅವಧಿ ಅದರಲ್ಲಿಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಇ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

**ವಿವರಣೆ:-** (ಎ) ಮಾಜಿ ಸೈನಿಕ ಎಂದರೆ, ಸಶಸ್ತ್ರದಳಗಳಾದ ನಿಯಮಿತ ಭೂದಳ, ನೌಕದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋದರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯುರಿಟಿಕೋರ್, ಜನರಲ್ ರಿಸರ್ವ್ ಇಂಜಿನೀಯರಿಂಗ್ ಫೋರ್ಸ್, ಲೋಕಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ. ಮತ್ತು (ಬಿ) ಕೇಂದ್ರ ಸಶಸ್ತ್ರದಳಗಳಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಸ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು)ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ, ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಸಿ) ಮೇಲ್ಕಂಡ ದಳದ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ

ಡಿ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಲ್ಲಿ ಬಿಡುಗಡೆಯಾದವನು. ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇನೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ. ಅಥವಾ

ಎಫ್) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ

ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪುರಸ್ಕಿ ವಿಜೇತರು.

ಈ ಮೇಲ್ಕಂಡ ವರ್ಗದ ಅಭ್ಯರ್ಥಿಗಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ.

**ವಿವರಣೆ:-** ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ, ಸಮವಸ್ತ್ರವನ್ನು ತ್ಯಜಿಸಲು

ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

ಎ) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾಪ್ಸ್‌ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

ಬಿ) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣಾ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ, ಅಥವಾ ಹಿಂದೆಯಿದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

ಈ) ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ 10 ವರ್ಷಗಳು

ಉ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

ಊ) ಅಭ್ಯರ್ಥಿಯು ಜೀತಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು. ಜೀತಕಾರ್ಮಿಕನಾಗಿದ್ದ ಅಭ್ಯರ್ಥಿಯು ವಯೋಮಿತಿ ಸಡಿಲಿಕೆ ಪಡೆಯಲು ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ನಿಂದ ಪಡೆದಿಟ್ಟುಕೊಂಡಿರತಕ್ಕದ್ದು.

## 8. ಆನ್‌ಲೈನ್ (Online) ಮೂಲಕ ಅರ್ಜಿಗಳನ್ನು ಸಲ್ಲಿಸಲು ನಿಗಧಿಪಡಿಸಿದ ಅವಧಿ

**ದಿನಾಂಕ: 20-11-2015 ರಿಂದ 19-12 -2015ರ ವರೆಗೆ**

## 9. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿಧಾನ

ಅರ್ಜಿಯನ್ನು ಆನ್‌ಲೈನ್(Online) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಯು ಮೀನುಗಾರಿಕೆ ಇಲಾಖೆಯ ಅಧಿಕೃತ ಅಂತರ್ಜಾಲ ತಾಣವಾದ www.karnataka.gov.in/fisheries ನಲ್ಲಿ "ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗಾಗಿ ಪ್ರಕಟಣೆ" ("Notification for Recruitment of Fisheries Fieldman Post") ಎನ್ನುವ ಲಿಂಕ್ ಮೇಲೆ ಕ್ಲಿಕ್ ಮಾಡಿದಾಗ ತೆರೆದ ಕಂಪ್ಯೂಟರ್ ಪರದೆಯ ಮೇಲೆ ಬರುವ ತಂತ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಕೆಗಾಗಿ ಮುಖ್ಯ ಪರದೆಯ (Main Screen) ಮೇಲೆ ಇರುವ ಈ ಕೆಳಗಿನ ನಾಲ್ಕು ಹಂತಗಳನ್ನು ಅನುಸರಿಸಬೇಕಾಗುತ್ತದೆ.

**9.1 ಅರ್ಜಿ ಸಲ್ಲಿಕೆ (Submit Application):** ಈ ಪರದೆಯಲ್ಲಿ ಅಭ್ಯರ್ಥಿಯು ತನ್ನ ವಿವರಗಳನ್ನು ಭರ್ತಿ ಮಾಡತಕ್ಕದ್ದು. (* ಚಿಹ್ನೆ ಇರುವ ಎಲ್ಲಾ ಅಂಶಗಳು ಕಡ್ಡಾಯ). ತದನಂತರದಲ್ಲಿ **'Preview'** ಬಟನ್ ಒತ್ತಿ ಸಲ್ಲಿಸಲಾಗಿರುವ ಎಲ್ಲಾ ವಿವರಗಳು ನಮೂದಾಗಿದೆಯೇ ಎಂದು ಪರಿಶೀಲಿಸಿಕೊಂಡು, ಅಗತ್ಯವಿದ್ದಲ್ಲಿ **'Edit'** ಬಟನ್ ಒತ್ತಿ ವಿವರಗಳನ್ನು ಸರಿಪಡಿಸಿಕೊಳ್ಳಲು ಅವಕಾಶವಿರುತ್ತದೆ. ಭರ್ತಿ ಮಾಡಿರುವ ಎಲ್ಲಾ ಮಾಹಿತಿಗಳು ಸರಿಯಾಗಿದೆಯೆಂದು ಖಾತ್ರಿ ಪಡಿಸಿಕೊಂಡ ನಂತರ **'Submit'** ಬಟನ್ ಒತ್ತುವುದು. ನಂತರ ಪರದೆಯಲ್ಲಿ ಮೂಡುವ ಅರ್ಜಿಯ ಐ.ಡಿ. (APPLICATION ID) ಸಂಖ್ಯೆ ಹಾಗೂ ವೆರಿಫಿಕೇಷನ್ ಕೋಡ್(**Verification code**) ಸಂಖ್ಯೆಯನ್ನು ಬರೆದಿಟ್ಟುಕೊಳ್ಳುವುದು. ಹೋಮ್ (**Home**) ಬಟನ್ ಒತ್ತಿದಾಗ ಮುಖ್ಯ ಪರದೆ (Main Screen) ಮೂಡುತ್ತದೆ.

**9.2. ಭಾವಚಿತ್ರ ಹಾಗೂ ಮಾದರಿ ಸಹಿಯನ್ನು ಅಪ್ಲೋಡ್ ಮಾಡುವುದು :** ಮುಖ್ಯ ಪರದೆಯಲ್ಲಿ ಎರಡನೇ ಕ್ರಮವಾಗಿ ಭಾವಚಿತ್ರ ಮತ್ತು ಮಾದರಿ ಸಹಿಯನ್ನು ತಂತ್ರಾಂಶದಲ್ಲಿ ಅಪ್ಲೋಡ್ (Upload)ಮಾಡಬೇಕಾಗುತ್ತದೆ. ಇದಕ್ಕಾಗಿ ತಮ್ಮ ಅಪ್ಲಿಕೇಷನ್ ಐ.ಡಿ. ಮತ್ತು ಜನ್ಮ ದಿನಾಂಕ ಬಳಸಿ, ಈಗಾಗಲೇ ಸ್ಕ್ಯಾನ್ ಮಾಡಿಕೊಂಡಿರುವ ಭಾವಚಿತ್ರ ಮತ್ತು ಮಾದರಿ ಸಹಿಯನ್ನು ಅಪ್ಲೋಡ್ ಮಾಡತಕ್ಕದ್ದು. ಭಾವಚಿತ್ರ ಮತ್ತು ಮಾದರಿ ಸಹಿಯನ್ನು ಅಪ್ಲೋಡ್ ಮಾಡಲು ಮುಖ್ಯ ಪರದೆಯ **'Upload Photo and Signature'** link ಅನ್ನು ಕ್ಲಿಕ್ ಮಾಡಿದಾಗ ಮೂಡುವ ಪರದೆಯಲ್ಲಿನ ಸೂಚನೆಗಳನ್ನು ಪಾಲಿಸುವುದು.

**9.3. ಪೋಸ್ಟಲ್ ಚಲನ್ ಪಡೆಯುವ ಕುರಿತು:-** ಮುಖ್ಯ ಪರದೆಯಲ್ಲಿ 3ನೇ ಕ್ರಮವಾಗಿ, 'Generate Postal Challan' link ಅನ್ನು ಕ್ಲಿಕ್ ಮಾಡಿದಾಗ ಅಭ್ಯರ್ಥಿಯು ಪಾವತಿಸಬೇಕಾದ ಶುಲ್ಕಕ್ಕೆ ಅಂಚೆ ಕಛೇರಿಯ ಚಲನ್ ಪರದೆಯ ಮೇಲೆ ಮೂಡುತ್ತದೆ. ಶುಲ್ಕದ ವಿವರಗಳನ್ನು ಪರಿಶೀಲಿಸಿಕೊಂಡು, ಮುದ್ರಿತ ಚಲನ್ ಪ್ರತಿಯನ್ನು ಪಡೆದು, ಮುದ್ರಿತ ಅರ್ಜಿ ಪ್ರತಿಯನ್ನು ತೆಗೆದುಕೊಂಡು ಕರ್ನಾಟಕ ರಾಜ್ಯಾದದ್ಯಾಂತ ಇ-ಪಾವತಿ ಸೌಲಭ್ಯವಿರುವ ಅಂಚೆ ಕಛೇರಿಯಲ್ಲಿ ಮುದ್ರಿತ ಅರ್ಜಿಯ ಪ್ರತಿ ತೋರಿಸಿ, ಈ ಮೇಲೆ ಹೇಳಿರುವ ಅರ್ಜಿಶುಲ್ಕ ಮತ್ತು ಅನ್ವಯಿಸುವ ಸೇವಾ ಶುಲ್ಕವನ್ನು ಪಾವತಿಸತಕ್ಕದ್ದು. ಆನ್ಲೈನ್ ಅರ್ಜಿಯ ಪ್ರತಿ ಮತ್ತು ಅಂಚೆ ಕಛೇರಿಯಲ್ಲಿ ಅರ್ಜಿ ಶುಲ್ಕ ಪಾವತಿಸಿದ ರಶೀತಿಯನ್ನು ಅಭ್ಯರ್ಥಿಗಳು ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು.

**9.4. ಭರ್ತಿ ಮಾಡಿದ ಅರ್ಜಿಯನ್ನು ಮುದ್ರಿಸಿಕೊಳ್ಳುವುದು:-** ಮುಖ್ಯ ಪರದೆಯಲ್ಲಿ 4ನೇ ಕ್ರಮವಾಗಿ, ಪೂರ್ಣಗೊಳಿಸಿದ ಅರ್ಜಿಯ ಮುದ್ರಿತ ಪ್ರತಿಯನ್ನು ಪಡೆದಿಟ್ಟುಕೊಳ್ಳುವುದು. ಪ್ರಾಧಿಕಾರವು ಸೂಚಿಸಿದಾಗ ತಪ್ಪದೇ ಹಾಜರುಪಡಿಸುವುದು.

**ವಿಶೇಷ ಸೂಚನೆ**: ಯಾವುದೇ ರೀತಿಯ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸುವ ಅಗತ್ಯ ಇರುವುದಿಲ್ಲ. ಆದರೆ, ಮೂಲ ದಾಖಲಾತಿಯ ಪರಿಶೀಲನಾ ದಿನಾಂಕದಂದು ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ಒಳಗಾಗಿ ಪಡೆದುಕೊಂಡ ದೃಢೀಕೃತ ದಾಖಲೆಗಳನ್ನು ಪರಿಶೀಲನೆಗೆ ನಿಗಧಿಪಡಿಸಿದ ದಿನಾಂಕದಂದು ಈ ಕೆಳಗಿನ ನೇಮಕಾತಿ ಪ್ರಾಧಿಕಾರಕ್ಕೆ ಹಾಜರಿಪಡಿಸತಕ್ಕದ್ದು.

"ಮೀನುಗಾರಿಕೆ ನಿರ್ದೇಶಕರು ಮತ್ತು ಮೀನುಗಾರಿಕೆ ಕ್ಷೇತ್ರಪಾಲಕರ
ನೇಮಕಾತಿ ಆಯ್ಕೆ ಪ್ರಾಧಿಕಾರ,ಮೀನುಗಾರಿಕೆ ನಿರ್ದೇಶನಾಲಯ, ಬೆಂಗಳೂರು-560001.

10. ಅರ್ಜಿ ಶುಲ್ಕ.

| **ಪ್ರವರ್ಗ** | **ನಿಗಧಿಪಡಿಸಲಾದ ಶುಲ್ಕ** |
|---|---|
| **ಸಾಮಾನ್ಯ ವರ್ಗ**<br>**2ಎ**<br>**2ಬಿ**<br>**3ಎ**<br>**3ಬಿ** | **ರೂ 300-00** |
| **ಪರಿಶಿಷ್ಟ ಜಾತಿ/ಪ.ಪಂಗಡ**<br>**ಪ್ರವರ್ಗ-1**<br>**ಮಾಜಿ ಸೈನಿಕ/ಅಂಗವಿಕಲ** | **ರೂ: 150-00** |

11. ಶುಲ್ಕ ಪಾವತಿಸಲು ಅನುಸರಿಸಬೇಕಾದ ವಿಧಾನ:

ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಂiÀÄಸುವ ಅಭ್ಯರ್ಥಿಗಳು ಮೊದಲು ಆನ್ಲೈನ್ ನಲ್ಲಿ ಅರ್ಜಿ ಸಲ್ಲಿಸಿದ ನಂತರ, ಮುದ್ರಿತ ಅರ್ಜಿ ಪ್ರತಿಯನ್ನು ತೆಗೆದುಕೊಂಡು ಕರ್ನಾಟಕ ರಾಜ್ಯಾದ್ಯಂತ ಇ-ಪಾವತಿ ಸೌಲಭ್ಯವಿರುವ ಅಂಚೆ ಕಛೇರಿಯಲ್ಲಿ ಮುದ್ರಿತ ಅರ್ಜಿಯ ಪ್ರತಿ ತೋರಿಸಿ, ಈ ಮೇಲೆ ಹೇಳಿರುವ ಅರ್ಜಿ ಶುಲ್ಕ ಮತ್ತು ಅನ್ವಯಿಸುವ ಸೇವಾ ಶುಲ್ಕವನ್ನು ಪಾವತಿಸತಕ್ಕದ್ದು. ಆನ್ಲೈನ್ ಅರ್ಜಿಯ ಪ್ರತಿ ಮತ್ತು ಅಂಚೆ ಕಛೇರಿಯಲ್ಲಿ ಅರ್ಜಿ ಶುಲ್ಕ ಪಾವತಿಸಿದ ರಶೀತಿಯನ್ನು ಅಭ್ಯರ್ಥಿಗಳು ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು.

**ಅರ್ಜಿ ಶುಲ್ಕವನ್ನು ಪಾವತಿಸಲು ಅಂತಿಮ ದಿನಾಂಕ 21-12-2015 ರವರೆಗೆ ನಿಗಧಿಪಡಿಸಲಾಗಿದೆ**

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಇಲಾಖೆಯ ಅಧಿಕೃತ ಅಂತರ್ಜಾಲ ತಾಣವಾದ www.karnataka.gov.in/fisheries ರಲ್ಲಿ ಪರಿಶೀಲಿಸಬಹುದಾಗಿದೆ. ಅಥವಾ ದೂರವಾಣಿ ಸಂ:080-22864604/ 080-22864732 ಅನ್ನು ಸಂಪರ್ಕಿಸಬಹುದಾಗಿದೆ. ಅಥವಾ ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಮೀನುಗಾರಿಕೆ ನಿರ್ದೇಶಕರು, ಮೀನುಗಾರಿಕೆ ನಿರ್ದೇಶನಾಲಯ, ಬೆಂಗಳೂರು-560001. ರವರ ಕಛೇರಿಯಲ್ಲಿ ಮಾಹಿತಿಯನ್ನು ಪಡೆಯಬಹುದಾಗಿದೆ.

## 12. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗಿನಂತೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ಒಳಗಾಗಿ ಸಂಬಂಧಿಸಿದ ಪ್ರಾಧಿಕಾರದಿಂದ ದೃಢೀಕೃತ ದಾಖಲೆಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು

1) ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ-“ಡಿ”
2) ಪ್ರವರ್ಗ-1 ಅಭ್ಯರ್ಥಿಗಳು ನಮೂನೆ “ಇ”
3) ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ”ಎಫ್” ನಲ್ಲಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪ್ರಮಾಣ ಪತ್ರವನ್ನು ಪಡೆದು ಇದರ ದೃಢೀಕೃತ ನಕಲನ್ನು ಮೂಲ ದಾಖಲಾತಿಯೊಂದಿಗೆ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

## 13. ಗ್ರಾಮೀಣಾ ಅಭ್ಯರ್ಥಿಗಳು:-

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ಮೀಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ದೃಢೀಕೃತ ಪ್ರಮಾಣ ಪತ್ರವನ್ನು ಪಡೆದು ಹಾಜರುಪಡಿಸತಕ್ಕದ್ದು, ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಮಾತ್ರ ಈ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದು ಅದರ ಒಂದೊಂದು ಫೋಟೋ ಪ್ರತಿಯನ್ನು ಹಾಜರುಪಡಿಸತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ,ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗಧಿತ ಪ್ರಾಧಿಕಾರಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲುರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಹಾಜರುಪಡಿಸತಕ್ಕದ್ದು.

ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-3ಎ, ಪ್ರವರ್ಗ-3ಬಿ, ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

**ಸೂಚನೆ**: ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗಾಗಿ ಪ್ರಾಧಿಕಾರ ಸೂಚನೆ ನೀಡಿದಾಗ ಸಲ್ಲಿಸತಕ್ಕದ್ದು.

## 14. ಕನ್ನಡ ಮಾಧ್ಯಮ ಅಭ್ಯರ್ಥಿ

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪಡೆದ ಪ್ರಮಾಣ ಪತ್ರವನ್ನು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

## 15. ಅಂಗವಿಕಲ ಅಭ್ಯರ್ಥಿ

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳಿಗೆ ಸಂಬಂಧಿಸಿದಂತೆ ದೃಷ್ಟಿಮಾಂದ್ಯತೆ ಹೊಂದಿರುವ ಅಭ್ಯರ್ಥಿಗಳಿಗೆ ಮೀಸಲಿರಿಸಿದ್ದು, ಸಂಬಂಧಿಸಿದ ಮೀಸಲಾತಿ ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19/11/2005ರ ಸರ್ಕಾರದ ಅಧಿಕೃತ ಜ್ಞಾಪನೆ ಸಂ.ಸಿಆಸುಇ 115 ಸೇನೆನಿ 2005ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಸದರಿ ಪ್ರಮಾಣ ಪತ್ರವನ್ನು ಪ್ರಾಧಿಕಾರ ಅಪೇಕ್ಷಿಸಿದಾಗ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

## 16. ಯೋಜನಾ ನಿರಾಶ್ರಿತ ಅಭ್ಯರ್ಥಿ

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರುವಂತೆ ಹೊಂದಿದ್ದು, ಇವುಗಳನ್ನು ಪರಿಶೀಲನೆಗಾಗಿ ಆಯೋಗವು ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು.

## 17. ಹೈದ್ರಾಬಾದ್ ಕರ್ನಾಟಕ ಪ್ರದೇಶದ ಅಭ್ಯರ್ಥಿ:-

ಹೈದ್ರಾಬಾದ್ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಮೀಸಲಿರಿಸಿದ ಮೀನುಗಾರಿಕೆ ಕ್ಷೇತ್ರಪಾಲಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಆ ಭಾಗದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ತತ್ಸಂಬಂಧ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನಿಯಮಾನುಸಾರ ಸಂಬಂಧಿಸಿದ ಪ್ರಾಧಿಕಾರದಿಂದ ಅನೆಕ್ಷರ್-ಎ ನಲ್ಲಿ ಅರ್ಹತಾ ಪ್ರಮಾಣ ಪತ್ರವನ್ನು ಕೊನೆಯ ದಿನಾಂಕದಂದು ಸಿಂಧುವಾಗಿರುವಂತೆ ಹೊಂದಿರತಕ್ಕದ್ದು. ಪ್ರಾಧಿಕಾರವು ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು.

## 18. ಪ್ರಮುಖ ಸೂಚನೆಗಳು

ಅಭ್ಯರ್ಥಿಗಳು ಯಾವುದೇ ಪ್ರಮಾಣ ಪ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಈ ಕೆಳಕಂಡ ಪ್ರಮಾಣ ಪತ್ರಗಳನ್ನು/ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿದ್ದು, ಮೀನುಗಾರಿಕೆ ಇಲಾಖೆಯ ನೇಮಕಾತಿ ಪ್ರಾಧಿಕಾರವು ಸೂಚಿಸಿದಾಗ ಸಂಬಂಧಿತ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

1. ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆಯ ಪ್ರಮಾಣ ಪತ್ರ (ಟಿ.ಸಿ.) / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of Cumulative Record)
3. ಸೈನಿಕ ಸೇವೆಯಿಂದ ಬಿಡುಗಡೆಯಾದ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

**ಟಿಪ್ಪಣಿ:** ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೆ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡಿನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ

4. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

5. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿ ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ತಹಶೀಲ್ದಾರರವರಿಂದ ಪಡೆದಿರತಕ್ಕದ್ದು. ಈ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಸಿಂಧುವಾಗಿದ್ದು ಇವುಗಳನ್ನು ಪರಿಶೀಲನೆಗಾಗಿ ಆಯೋಗವು ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು.

   [ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ--2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

   ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-3ಎ, ಪ್ರವರ್ಗ-3ಬಿ, ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.]

6. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7. ಅಂಗವಿಕಲ ಅಭ್ಯರ್ಥಿಗಳು ನಿಗಧಿಪಡಿಸಿದ ನಮೂನೆಯಲ್ಲಿ ವೈದ್ಯಕೀಯ ಪ್ರಮಾಣ ಪ್ರಪತ್ರವನ್ನು ಹೊಂದಿರಬೇಕು. (ಮೀಸಲಾತಿ ಕೋರಿದ್ದಲ್ಲಿ).
8. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
9. ನಿಗಧಿಪಡಿಸಿದ ಅರ್ಜಿ ಶುಲ್ಕವನ್ನು ಅಂಚೆ ಕಛೇರಿಗೆ ಜಮಾ ಮಾಡಿದ ಮೂಲ ಚಲನ್.
10. ಹೈದರಾಬಾದ್-ಕರ್ನಾಟಕ ಮೀಸಲಾತಿ ಕುರಿತು ನಿಗಧಿತ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ಪಡೆದಿಟ್ಟುಕೊಂಡಿರಬೇಕು.
11. ಕ್ರಮ ಸಂಖ್ಯೆ:3, 4, 5, 6, 7, 8 ಮತ್ತು 10ಕ್ಕೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.
12. ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಮೀನುಗಾರಿಕೆ ಇಲಾಖೆಯ ನೇಮಕಾತಿ ಪ್ರಾಧಿಕಾರವೇ ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡು ಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ಜಾರಿ ಮಾಡುತ್ತದೆ. ಆದ್ದರಿಂದ ನಿಗಧಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ ಮತ್ತು ಸಹಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

13. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಪರೀಕ್ಷಾ ಕೇಂದ್ರ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿಗಳಿಗೆ ಸಂಬಂಧಿತ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆ ನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

## 19. ಮೀನುಗಾರಿಕೆ ಇಲಾಖೆ ನೇಮಕಾತಿ ಪ್ರಾಧಿಕಾರದೊಡನೆ ಪತ್ರ ವ್ಯವಹಾರ :-

ಮೀನುಗಾರಿಕೆ ನಿರ್ದೇಶಕರು, ಮೀನುಗಾರಿಕೆ ನಿರ್ದೇಶನಾಲಯ,ಬೆಂಗಳೂರು ರವರ ಕಛೇರಿಯಿಂದ ಇಲಾಖೆಯು ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದಾಗ್ಯೂ ಈಜು ಪರೀಕ್ಷೆಗಾಗಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಾಗಿ ಪ್ರವೇಶ ಪತ್ರಗಳನ್ನು ಪಡೆಯುವ ಸಲುವಾಗಿ ಇಲಾಖೆಯ ವೆಬ್ಸೈಟಿನಲ್ಲಿ ಪ್ರಕಟಣೆಯನ್ನು ಪ್ರಕಟಿಸಲಾಗುವುದು. ಅರ್ಹರಿರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಪಟ್ಟ ಅಂತರ್ಜಾಲತಾಣದಿಂದ (website) ಪ್ರವೇಶ ಪತ್ರಗಳ ಮುದ್ರಿತ ಪ್ರತಿಗಳನ್ನು ಪಡೆದುಕೊಳ್ಳಬಹುದಾಗಿದೆ. ಹಾಗೂ ಆನ್ಲೈನ್ನಲ್ಲಿ ಅರ್ಜಿಗಳನ್ನು ಭರ್ತಿ ಮಾಡುವ ಬಗ್ಗೆ/ಶುಲ್ಕ ಪಾವತಿಬಗ್ಗೆ/ ಪ್ರವೇಶ ಪತ್ರಗಳ ಬಗ್ಗೆ ಹೆಚ್ಚಿನ ಮಾಹಿತಿ ಬೇಕಾಗಿದ್ದಲ್ಲಿ ಈ ಕೆಳಗಿನ ಇಲಾಖೆಯ ಸಹಾಯವಾಣಿಗೆ ಸಂಪರ್ಕಿಸತಕ್ಕದ್ದು.

**ಸಹಾಯವಾಣಿ ಸಂಖ್ಯೆ: 080-22864604 ಮತ್ತು 080-22864732**

## 20. ವಿಶೇಷ ಸೂಚನೆಗಳು

1. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ Online ಅರ್ಜಿಯ ಒಂದು ಪ್ರತಿಯನ್ನು ಮತ್ತು ಶುಲ್ಕ ಪಾವತಿಸಿದ ರಶೀದಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.
2. ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.
3. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರ ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಬಾಕ್ಸ್ ತುಂಬತಕ್ಕದ್ದು ಹಾಗೂ ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಅನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿದ್ದು ಆಯ್ಕೆ ಪ್ರಾಧಿಕಾರವು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.
4. ಒಬ್ಬನೇ ಅಭ್ಯರ್ಥಿ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಯಾವುದಾದರು ಒಂದು ಅರ್ಜಿಯನ್ನು ಮಾತ್ರ (ಕ್ರಮಬದ್ಧವಾಗಿದ್ದಲ್ಲಿ) ಪರಿಗಣಿಸಲಾಗುವುದು. ಈ ವಿಚಾರದಲ್ಲಿ ಪ್ರಾಧಿಕಾರದ ತೀರ್ಮಾನವೇ ಅಂತಿಮ. ಇದರಲ್ಲಿ ಅಭ್ಯರ್ಥಿಗಳಿಗೆ ಅನಾನುಕೂಲವಾದಲ್ಲಿ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

5. ಸರ್ಕಾರಿ ಆದೇಶ ಸಂಖ್ಯೆ:ಎಫ್ಡಿ-ಎಸ್ಪಿಎಲ್-04-ಪಿಇಟಿ-2005 ದಿನಾಂಕ:31-3-2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ(Contributory Pension Scheme) ಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ದರಾಗಿರುತ್ತಾರೆ.

6. ಈ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದಂತೆ ನಿಗದಿತ ವಿದ್ಯಾರ್ಹತೆ, ಮೀಸಲಾತಿಯ ಸ್ಪಷ್ಟ ನಮೂದು, ಹುಟ್ಟಿದ ದಿನಾಂಕ ಅಥವಾ ಇತರೆ ಯಾವುದೇ ಮಾಹಿತಿಯನ್ನು ಅಧಿಸೂಚನೆ ಹಾಗೂ ಆನ್ಲೈನ್ ಅರ್ಜಿಯಲ್ಲಿರುವ ಸೂಚನೆಗಳ/ ವಿವರಣೆಗಳಂತೆ ವಿವರಣೆಗಳಂತೆ ಅಭ್ಯರ್ಥಿಗಳು ಆಯಾ ಅಂಕಣಗಳನ್ನು ಅರ್ಜಿಗಳಲ್ಲಿ ಭರ್ತಿ ಮಾಡತಕ್ಕದ್ದು. ಒಂದು ವೇಳೆ ಆನ್ ಲೈನ್ನಲ್ಲಿ ಅರ್ಜಿಗಳನ್ನು ಕ್ರಮಬದ್ಧವಾಗಿ ಭರ್ತಿ ಮಾಡದೆ ಇದ್ದಲ್ಲಿ, ಅಂತಹ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಅಭ್ಯರ್ಥಿಯು ಭರ್ತಿ ಮಾಡಿರುವ ಮಾಹಿತಿಗಳಲ್ಲಿನ ಲೋಪದೋಷಗಳಿಗೆ ಅಭ್ಯರ್ಥಿಯೇ ಹೊಣೆಗಾರರಾಗುತ್ತಾರೆ. ಅಭ್ಯರ್ಥಿಯು ಈಜು ಪರೀಕ್ಷೆಯಲ್ಲಿ ತೇರ್ಗಡೆ, ಅರ್ಹತೆ, ಜೇಷ್ಠತೆ, ಮೀಸಲಾತಿ ಇತ್ಯಾದಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರವೇ ಸಂಬಂಧಿತ ಅರ್ಹ ಅಭ್ಯರ್ಥಿಗಳ ಹೆಸರುಗಳನ್ನು ಆಯ್ಕೆ ಪಟ್ಟಿಗೆ ಸೇರಿಸಲಾಗುವುದು. ಈ ಬಗ್ಗೆ ಪ್ರಾಧಿಕಾರದ ತೀರ್ಮಾನವೇ ಅಂತಿಮ.

## 21. ದುರ್ನಡತೆ

ಒಬ್ಬ ಅಭ್ಯರ್ಥಿಯು ನಕಲು ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂಬ ಬಗ್ಗೆ ತಪ್ಪಿತಸ್ಥನೆಂದು ಕಂಡು ಬಂದಲ್ಲಿ ಹಾಗೂ ನೇಮಕಾತಿ ಪ್ರಾಧಿಕಾರದಿಂದ ನೀಡಲಾದ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹಾರಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ ಮೀನುಗಾರಿಕೆ ಇಲಾಖೆಯು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯ ಆಗಿ ಡಿಬಾರ್ ಮಾಡಲಾಗುವುದು.

(ಹೆಚ್.ಎಸ್.ವೀರಪ್ಪಗೌಡ)
ಮೀನುಗಾರಿಕೆ ನಿರ್ದೇಶಕರು ಹಾಗೂ
ಮೀನುಗಾರಿಕೆ ಕ್ಷೇತ್ರಪಾಲಕರ ನೇಮಕಾತಿ ಪ್ರಾಧಿಕಾರ

## 22. ನಮೂನೆಗಳು

(ಪ.ಜಾ / ಪ.ಪಂ.ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ - ಡಿ

## ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

## ಪ್ರಮಾಣ ಪತ್ರ

.............................................. ರಾಜ್ಯದ / ಕೇಂದ್ರಾಡಳಿತ ಪ್ರದೇಶ * .......................... ಜಿಲ್ಲೆಯ / ವಿಭಾಗದ .................................................... ಗ್ರಾಮ / ಪಟ್ಟಣ * ನಿವಾಸಿಯಾದ ಶ್ರೀ / ಶ್ರೀಮತಿ .................................. ಎಂಬುವರ ಮಗ / ಮಗಳಾದ ಶ್ರೀ / ಶ್ರೀಮತಿ ....................................... ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

* ಸಂವಿಧಾನ (ಅನುಸೂಚಿತ ಜಾತಿಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬೈ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯ, 1971ರ ಮೂಲಕ ತಿದ್ದುಪಡಿಯಾದಂತೆ)

* ಸಂವಿಧಾನ

* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾಗಿಗಳ ಆದೇಶ

* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ

ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಬುಡಕಟ್ಟುಗಳ ಆದೇಶ, 1959

* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ)(ಉತ್ತರ ಪ್ರದೇಶ) ಆದೇಶ, 1967

* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988

* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* .................................................... ಮತ್ತು / ಅಥವಾ ಅವನ* / ಅವಳ * ಕುಟುಂಬವು .............................. ರಾಜ್ಯ / ಕೇಂದ್ರಾಡಳಿತ ಪ್ರದೇಶದ ................ ಜಿಲ್ಲಾ / ವಿಭಾಗದ ................................. ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ(ಗಳು).

ಸಹಿ.............................

ಸ್ಥಳ :

ತಹಸೀಲ್ದಾರ್

ದಿನಾಂಕ :

ಪದನಾಮ ಕಛೇರಿಯ ಮೊಗರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

*ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳು" ಎಂಬ ಪದಾವಳಿಯ ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂ.ಬಿಡಿ 12028/ 2/76-ಎಸ್-ಸಿಟಿ-1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ: ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂ.17-2-74 ಇಎಸ್ಟಿ (ಎಸ್ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ, ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

---

(ಪ್ರವರ್ಗ-01ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಇ

(ನಿಯಮ 3ಎ (2) (3) ನೋಡಿ)

## ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ

................................................................ ಗ್ರಾಮ / ಪಟ್ಟಣ / ನಗರ ನಿವಾಸಿಯಾದ ಶ್ರೀ / ಶ್ರೀಮತಿ .................................................................................................... ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ .................................................................................................... ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ........................................... ಜಾತಿಯ ................................................................ ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ತಹಶೀಲ್ದಾರ್

........................ ತಾಲ್ಲೂಕು.

ಕಛೇರಿಯ ಮೊಗರು

**ಪ್ರವರ್ಗ-2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ**

**ನಮೂನೆ ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ

ತಹಶೀಲ್ದಾರರು,

..................... ತಾಲ್ಲೂಕು,

............................ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ........................................................................ ಎಂಬುವರ ಮಗ / ಮಗಳು / ಪತಿ / ಪತ್ನಿ ........................................................................ ಆದ ನಾನು ಮೇಲುಸ್ತರದಲ್ಲಿ (ಅಡಿeಚಿmಥಿ ಐಚಿಥಿeಡಿ) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1 ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :

2 ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
ತಾಲ್ಲೂಕು :
ಜಿಲ್ಲೆ :

3 ಅಭ್ಯರ್ಥಿಹು ಹುಟ್ಟಿದ ದಿನಾಂಕ, ವಯಸ್ಸು ಮತ್ತು ಹುಟ್ಟಿದ ಸ್ಥಳ :

4 ಅಭ್ಯರ್ಥಿಯ ತಂದೆ/ತಾಯಿ/ಪೋಷಕರ / ಪತಿಯ / ಪತ್ನಿಯ ಹೆಸರು ಮತ್ತು ಉದ್ಯೋಗ (ಉದ್ಯೋಗವು ಸರ್ಕಾರಿ / ಅರೆ ಸರ್ಕಾರಿ / ಸಾರ್ವಜನಿಕ ಉದ್ಯಮ / ಖಾಸಗಿ :

5 ಅಭ್ಯರ್ಥಿಯ ಪ್ರಸ್ತುತ ವಿಳಾಸ (ಸ್ಪಷ್ಟವಾಗಿ ನಮೂದಿಸುವುದು)

6 ಅಭ್ಯರ್ಥಿಯ ಖಾಯಂ ವಿಳಾಸ :

7 ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ
ಮಾಡಿದ ಶಾಲೆಗಳ ವಿವರಗಳು

ಪ್ರಾಥಮಿಕ
ಮಾಧ್ಯಮಿಕ
ಪ್ರೌಢ

8 ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ
ತಂದೆ/ತಾಯಿ/ಪೋಷಕರ (ತಂದೆ/ತಾಯಿ
ಜೀವಂತವಿಲ್ಲದಿದ್ದರೆ) ಇವರ ಒಟ್ಟು
ವಾರ್ಷಿಕ ಆದಾಯ ಎಲ್ಲಾ
ಮೂಲಗಳಿಂದ

1) ವೇತನ ಶ್ರೇಣಿ :

2) ಜಮೀನಿನ ವಿವರ :

3) ಇತರ ಮೂಲಗಳು :

9 ಆದಾಯ ತೆರಿಗೆ ಪಾವತಿದಾರರೇ?

10 ಸಂಪತ್ತು ತೆರಿಗೆ ಪಾವತಿದಾರರೇ

11 ಮಾರಾಟ ತೆರಿಗೆ ಪಾವತಿದಾರರೇ

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ

ದಿನಾಂಕ

ತಂದೆ / ತಾಯಿ / ಪೋಷಕರ ಸಹಿ
(ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ ಇವರ ಸಹಿ)

## ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

2)

(ಪೂರ್ಣ ವಿಳಾಸದೊಂದಿಗೆ)

**ಪರಿಶೀಲನಾ ಪ್ರಮಾಣ ಪತ್ರ**

1) ಶ್ರೀಮತಿ / ಶ್ರೀ ............................................................................................ ಎಂಬುವವರ ಮಗ /ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ಕುಮಾರಿ ..................................................................... ಎಂಬುವವರು ಕರ್ನಾಟಕ ರಾಜ್ಯದ ............................................... ಜಿಲ್ಲೆಯ ವಿಭಾಗ ...................... ................................ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2) ಶ್ರೀ/ಶ್ರೀಮತಿ/ಕುಮಾರಿ ........................................................................... ಇವರ ತಂದೆ/ತಾಯಿ/ ಪೋಷಕರು ಸರ್ಕಾರಿ ಆದೇಶ ಸಂ.ಎಸ್ಡಬ್ಲ್ಯೂಡಿ 251 ಬಿಸಿಎ 94 ದಿನಾಂಕ 31/01/1995ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (ಅಡಿeಚಿmಥಿ ಐಚಿಥಿeಡಿ) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ತಹಶೀಲ್ದಾರ್

ಸ್ಥಳ ........................ ತಾಲ್ಲೂಕು.

ದಿನಾಂಕ ಕಛೇರಿಯ ಮೊಹರು

---

ಸೂಚನೆ-1 : ಇದರಲ್ಲಿ ಉಪಯೋಗಿಸಲಾದ "ಸಾಮಾನ್ಯ ನಿವಾಸಿ" ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ-1 : ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂ. ಎಸ್ಡಬ್ಲ್ಯೂಡಿ 251 ಬಿಸಿಎ 94 ದಿನಾಂಕ 31/01/1995ರನ್ವಯ ಮೇಲುಸ್ತರ (ಅಡಿeಚಿmಥಿ ಐಚಿಥಿeಡಿ) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

ನಮೂನೆ-2

# ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ ............................................................................................ ರವರ ಮಗ / ಮಗಳು / ಪತ್ನಿ / ಶ್ರೀ/ಶ್ರೀಮತಿ/ಕುಮಾರಿ ................................................................ ಜಿಲ್ಲೆ .......................................... ತಾಲ್ಲೂಕು .......................................... ಗ್ರಾಮದಲ್ಲಿ ......................................................................... ವಾಸವಾಗಿರುವ ಇವರು ಒಂದನೇ ತರಗತಿಯಿಂದ ....................................................... ತರಗತಿಯವರೆಗೆ .................................................. ಜಿಲ್ಲೆ .......................................... ತಾಲ್ಲೂಕು ................. ಪಟ್ಟಣ ................................ ಶಾಲೆಯಲ್ಲಿ ವ್ಯಾಸಂಗ ಮಾಡಿ ............... ವರ್ಷ ನಡೆದ ನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

| | |
|---|---|
| ಮೇಲು ರುಜು | ಸಹಿ |
| ಕ್ಷೇತ್ರ ಶಿಕ್ಷಣ ಅಧಿಕಾರಿ | ಮುಖ್ಯೋಪಾಧ್ಯಾಯರ ಸಹಿ |
| ಕಛೇರಿಯ ಮೊಹರು | ಮತ್ತು ಸಂಸ್ಥೆಯ ಮೊಹರು |

ಸ್ಥಳ :

ದಿನಾಂಕ:

ಸರ್ಕಾರದ ಸುತ್ತೋಲೆ ಸಂ.ಸಿಆಸುಇ 44 ಸೇನೆನಿ 2001 ದಿನಾಂಕ 27/07/2001

ನಮೂನೆ-3

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ

ಶ್ರೀ/ಶ್ರೀಮತಿ ...................................................................................... ಎಂಬುವವರ ಮಗ/ಮಗಳು/ಪತ್ನಿ/ ಶ್ರೀಮತಿ/ಕುಮಾರಿ ................................................ ಜಿಲ್ಲೆ ................................................ ತಾಲ್ಲೂಕು ........................... ಗ್ರಾಮದಲ್ಲಿ ವಾಸವಾಗಿರುವ ಇವರು / ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆ ಆಸ್ತಿಯನ್ನು ................................. ಯೋಜನೆಗಾಗಿ ........................ ಇಸವಿಯಂದು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಲಾಗಿದೆ.

(i) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು

(ii) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ; ಯೋeನೆಯಿಂದ ತಾವು ವಾಸಿಸುವ ಮನೆ;

(iii) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ;

(iv) ** ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು

ತಹಶೀಲ್ದಾರ್ ಸಹಿ:

ಸ್ಥಳ ....................... ತಾಲ್ಲೂಕು.

ದಿನಾಂಕ ಕಛೇರಿಯ ಮೊಹರು

(**) ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು)

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀಮತಿ / ಶ್ರೀ .......................................................................................... ರವರ ಮಗ / ಮಗಳು / ಪತ್ನಿ / ಕುಮಾರಿ .......................................................................................... ಜಿಲ್ಲೆ ........................... ತಾಲ್ಲೂಕು .......................................................................... ಗ್ರಾಮದಲ್ಲಿ ವಾಸವಾಗಿರುವ ಇವರು ................. ನೇ ತರಗತಿಯಿಂದ ............................................... ನೇ ತರಗತಿಯವರೆಗೆ ............................. ಶೈಕ್ಷಣಿಕ ವರ್ಷದಿಂದ ............................... ಶೈಕ್ಷಣಿಕ ವರ್ಷದವರೆಗೆ ................................................................. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

ದಿನಾಂಕ

ಅನುಬಂಧ-ಎ

ಅರ್ಹತಾ ಪ್ರಮಾಣ ಪತ್ರ

[ಅನುಚ್ಛೇದ 371 (ಜೆ) ಮೇರೆಗೆ]

(3(3)ನೇ ನಿಯಮ ನೋಡಿ)

[ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013]

ಶ್ರೀ/ಶ್ರೀಮತಿ ______________ ರವರು _____________ ರವರ ಮಗ/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ________________ ಜಿಲ್ಲೆಯ ______________ ತಾಲ್ಲೂಕಿನ ______________________ ಗ್ರಾಮ/ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: _________________

ದಿನಾಂಕ: _______________

ಹೆಸರು: ________________

ಅಸಿಸ್ಟೆಂಟ್ ಕಮೀಷನರ್

___________ ಉಪವಿಭಾಗ

__________ ಜಿಲ್ಲೆ